1107 (1572) ಶ್ರೀ ಅಂಜನಾಮೂರ್ತಿ (ನೆಲಮಂಗಲ): ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಡತನರೇಖೆಗಿಂತ ಕೆಳಗಿರುವ ಕುಟುಂಬದ ಎರಡು ಹೆಣ್ಣು ಮಕ್ಕಳಿಗೆ ತಲಾ 10,000 ರೂಪಾಯಿಗಳಂತೆ ಭಾಗ್ಯಲಕ್ಷ್ಮೀ ಯೋಜನೆಯಡಿಯಲ್ಲಿ ಏಪ್ರಿಲ್ 1ರಿಂದ ಪೂರ್ವಾನ್ವಯವಾಗುವಂತೆ ಬಿಡುಗಡೆಯಾಗಿರುವ ಹಣ ಎಷ್ಟು;

ಆ) ಈ ಯೋಜನೆಯಡಿಯಲ್ಲಿ ಎಷ್ಟು ಹೆಣ್ಣು ಮಕ್ಕಳಿಗೆ ಹಣ ಮಂಜೂರು ಮಾಡಲಾಗಿದೆ (ಜಿಲ್ಲಾವಾರು ಮತ್ತು ತಾಲ್ಲೂಕುವಾರುಗಳಿಂದ ಮಾಹಿತಿ ನೀಡುವುದು)?

ಶ್ರೀ ಹೆಚ್.ಕೆ. ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು) :

ಅ) ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಲ್ಲಿ ದಿನಾಂಕ: 1-4-2006ರಂದು ಹಾಗೂ ನಂತರ ಜನಿಸಿದ ಹೆಣ್ಣುಮಕ್ಕಳ ಆಯ್ಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಹಣ ಬಿಡುಗಡೆಯಾಗಿರುವುದಿಲ್ಲ.

ಈ ಯೋಜನೆಗಾಗಿ 2006-07ನೇ ಸಾಲಿನಲ್ಲಿ ರೂ. 234.00 ಕೋಟಿ ನಿಗದಿ ಪಡಿಸಲಾಗಿದೆ.

ಆ) ಹಣ ಇನ್ನೂ ಬಿಡುಗಡೆಯಾಗಿರುವುದಿಲ್ಲ. ಫಲಾನುಭವಿಗಳ ಸಮೀಕ್ಷೆ ನಡೆಯುತ್ತಿದೆ.

1109 (942) ಶ್ರೀ ಪಾಟೀಲ್ ಎ.ಬಿ. (ಸಂಕೇಶ್ವರ್): ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಕ್ಕೇರಿ ತಾಲ್ಲೂಕಿನಲ್ಲಿ ಬರುವ ರಾಜ್ಯ ಹೆದ್ದಾರಿಗೆ ಸಂಬಂಧಪಟ್ಟ ರಸ್ತೆಗಳು ಯಾವುವು;

ಆ) ಈ ರಸ್ತೆಗಳು ಯೋಗ್ಯವಲ್ಲದಷ್ಟು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ದುರಸ್ತಿ ಕಾಮಗಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು) :

ಅ) ಹುಕ್ಕೇರಿ ತಾಲ್ಲೂಕಿನಲ್ಲಿ ಬರುವ ರಾಜ್ಯ ಹೆದ್ದಾರಿಗಳ ವಿವರ ಕೆಳಗಿನಂತಿವೆ.

1) ಪಡುಬಿದ್ರೆ-ಚಿಕ್ಕಲಗುಡ್ಡ ರಾಜ್ಯ ಹೆದ್ದಾರಿ -1

2) ಬಿಜಾಪುರ-ಸಂಕೇಶ್ವರ ರಾಜ್ಯ ಹೆದ್ದಾರಿ ಸಂಖ್ಯೆ-12

3) ಮಂಗಸೂಳಿ-ಲಕ್ಷೇಶ್ವರ ರಾಜ್ಯ ಹೆದ್ದಾರಿ -73

4) ಶೆಟ್ಟಿಹಳ್ಳಿ-ಇಚಲಕರಂಜಿ ರಾಜ್ಯ ಹೆದ್ದಾರಿ-78

5) ಸಂಕೇಶ್ವರ-ಸದಲಗಾ ರಾಜ್ಯ ಹೆದ್ದಾರಿ -97

6) ಸಂಕೇಶ್ವರ-ಸಂಗಮ ರಾಜ್ಯ ಹೆದ್ದಾರಿ -44

ಆ) ಬಂದಿದೆ.

ಇ) ಸಂಕೇಶ್ವರ ಸಂಗಮ ರಾಜ್ಯ ಹೆದ್ದಾರಿಯ 28.35 ಕಿಮೀ. ಮತ್ತು ಜೇವರ್ಗಿ-ಚಿಕ್ಕೋಡಿ-ಸಂಕೇಶ್ವರ ರಾಜ್ಯ ಹೆದ್ದಾರಿಯ 13.33 ಕಿಮೀ ರಸ್ತೆಯನ್ನು ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ಕೈಗೆತ್ತಿಕೊಳ್ಳಲಾಗುತ್ತಿದೆ.